ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರರವರ ನ್ಯಾಯಾಲಯ ನಾಡಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/48/2015-16.

ದಿನಾಂಕ:12-07-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಶಿವಕುಮಾರ ತಂದೆ ಲೇಟ್ ಚಿಕ್ಕಳ್ಳಿ ವೀರಣ್ಣ<br>2)ಮಧುಸೂದನ ತಂದೆ ಲೇಟ್ ಚಿಕ್ಕಳ್ಳಿ ವೀರಣ್ಣ<br>ಎಂ.ಬಿ.ಅಯ್ಯನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು | ಜೆ.ಅಶ್ವತ್‌ಕುಮಾರ ತಂದೆ ಲೇಟ್ ಜೆ.ಬಸಪ್ಪ.<br>ಎಂ.ಬಿ.ಅಯ್ಯನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು |

ಕೂಡ್ಲಿಗಿ ತಾಲೂಕು ಎಂ.ಬಿ.ಅಯ್ಯನಹಳ್ಳಿ ಗ್ರಾಮದ ಸನಂ 17ಎಪೈಕಿ. ವಿಸ್ತೀರ್ಣ 6-31. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ.

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಎಂ.ಬಿ.ಅಯ್ಯನಹಳ್ಳಿ ಗ್ರಾಮದ ಸನಂ 17ಎಪೈಕಿ. ವಿಸ್ತೀರ್ಣ 6-31. ಎಕ್ರೆ ಜಮೀನನ್ನು ಸದರಿ ಗ್ರಾಮದ ಶಿವಕುಮಾರ ತಂದೆ ಲೇಟ್ ಚಿಕ್ಕಳ್ಳಿ ವೀರಣ್ಣ. ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಎಂ.ಬಿ.ಅಯ್ಯನಹಳ್ಳಿ ಇವರು ನಮೂನೆ-21 ನೋಟಿಸನ್ನು ದಿನಾಂಕ 29-07-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ಜೆ.ಅಶ್ವತ್‌ಕುಮಾರ ತಂದೆ ಲೇಟ್ ಜೆ.ಬಸಪ್ಪ. ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 03/2015-16.. ದಿನಾಂಕ 30-08-2015. ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 16-03-2016 ರಿಂದ 12-07-2016. ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಎಂ.ಬಿ.ಅಯ್ಯನಹಳ್ಳಿ ಗ್ರಾಮದ ಸನಂ 17ಎಪೈಕಿ. ವಿಸ್ತೀರ್ಣ 6-31. ಎಕ್ರೆ ಜಮೀನು ನಮ್ಮ ತಾಯಿಯವರಾದ ಚಿಕ್ಕಳ್ಳಿ ಶಾಂತಮ್ಮ ಗಂಡ ಲೇಟ್ ಚಿಕ್ಕಳ್ಳಿ ವೀರಣ್ಣ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 22-04-2013 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ನಮ್ಮಗಳ ಹೆಸರಲ್ಲಿ ಜಂಟಿಯಾಗಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನಿನ ಹಕ್ಕು ಬದಲಾವಣೆಯನ್ನು ತಡೆಯಿಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಮತ್ತು ತಕರಾರುದಾರರ ಹೇಳಿಕೆಗಳನ್ನು ಕೇಳಿ ಅರ್ಜಿದಾರರು ಸೂಕ್ತ ದಾಖಲೆಗಳನ್ನು ಹಾಜರುಪಡಿಸಿಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಎಂ.ಬಿ.ಅಯ್ಯನಹಳ್ಳಿ ಗ್ರಾಮದ ಸನಂ 17ಎಪೈಕಿ. ವಿಸ್ತೀರ್ಣ 6-31. ಎಕ್ರೆ ಜಮೀನಿನ ಅರ್ಜಿದಾರರು ಸೂಕ್ತ ದಾಖಲೆಗಳನ್ನು ಸಲ್ಲಿಸಿಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 12-07-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರ್
ನಾಡಕಛೇರಿ ಗುಡೇಕೋಟೆ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಅರ್ಜಿದಾರರಾದ [illegible] ತಂದೆ ಚಿಕ್ಕಳ್ಳಿ ವೀರಣ್ಣ. ಮಧುಸೂದನ ತಂದೆ ಲೇಟ್ ಚಿಕ್ಕಳ್ಳಿ ವೀರಣ್ಣ ಎಂ.ಬಿ.ಅಯ್ಯನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಜೆ.ಅಶ್ವತ್‌ಕುಮಾರ ತಂದೆ ಲೇಟ್ ಜೆ.ಬಸಪ್ಪ. ಎಂ.ಬಿ.ಅಯ್ಯನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.